349

## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ವಿದೇಶಿ ವ್ಯಾಸಂಗಕ್ಕೆ ಆಯ್ಕೆ ಮಾಡುವ ಸಂಬಂಧ "ಪ್ರಬುದ್ಧ ಯೋಜನೆಯಡಿ" ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸುವ ಬಗ್ಗೆ.

ಓದಲಾಗಿದೆ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 183 ಪಕವಿ 2015, ದಿನಾಂಕ: 24-08-2015
2. ಸರ್ಕಾರದ ಆದೇಶ ಸಂಖ್ಯೆ: ಸಕಇ 334 ಪಕವಿ 2017, ದಿನಾಂಕ: 19-05-2017

********

**ಪ್ರಸ್ತಾವನೆ:**

ಸಮಾಜ ಕಲ್ಯಾಣ ಇಲಾಖೆ ವತಿಯಿಂದ ರಾಜ್ಯದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವಿದ್ಯಾರ್ಥಿಗಳನ್ನು ವಿದೇಶಿ ವ್ಯಾಸಂಗಕ್ಕೆ ಆಯ್ಕೆ ಮಾಡಲು ಕೆಲವು ಬದಲಾವಣೆಗಳನ್ನು ಮಾಡಬೇಕಾಗಿರುವುದರಿಂದ ಮತ್ತು ಭಾರತ ಸರ್ಕಾರದ ಇತ್ತೀಚಿನ ಮಾರ್ಗಸೂಚಿಗಳನ್ನು ಸಹ ಅವಶ್ಯಕತೆಗನುಗುಣವಾಗಿ ಸೇರಿಸಿಕೊಂಡು ಮಾರ್ಗಸೂಚಿಗಳನ್ನು ಪರಿಷ್ಕರಿಸಿ ಸರ್ಕಾರಿ ಆದೇಶ ಹೊರಡಿಸಲು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಸಕಇ 334 ಪಕವಿ 2017, ಬೆಂಗಳೂರು, ದಿನಾಂಕ:11-01-2019**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳಿಂದ ಪ್ರಸಕ್ತ (2018-19 ನೇ) ಸಾಲಿನಿಂದ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳನ್ನು ವಿದೇಶಿ ವಿಶ್ವವಿದ್ಯಾನಿಲಯಗಳಲ್ಲಿ ಉನ್ನತ ವ್ಯಾಸಂಗಕ್ಕಾಗಿ ಆಯ್ಕೆ ಮಾಡಲು ಪರಿಷ್ಕೃತ ಮಾರ್ಗಸೂಚಿಗಳನ್ನು ಹೊರಡಿಸಿ "ಪ್ರಬುದ್ಧ ಯೋಜನೆ" ಎಂದು ಹೆಸರಿಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳನ್ನು ಅನುಬಂಧದಲ್ಲಿ ನೀಡಲಾಗಿದೆ. ಪರಿಷ್ಕೃತ ಮಾರ್ಗಸೂಚಿಗಳು ತಕ್ಷಣದಿಂದ ಜಾರಿಗೆ ಬರುತ್ತವೆ.. ಅದರಂತೆ ಕಾರ್ಯಕ್ರಮವನ್ನು ಅನುಷ್ಠಾನಗೊಳಸಲು ಕ್ರಮ ಕೈಗೊಳ್ಳಲು ಆದೇಶಿಸಲಾಗಿದೆ

ಸರ್ಕಾರದ ಆದೇಶ ಸಂಖ್ಯೆ:ಸಕಇ 183 ಪಕವಿ 2015, ದಿನಾಂಕ: 24-08-2015, ಮತ್ತು ಸರ್ಕಾರದ ಆದೇಶ ಸಂಖ್ಯೆ:ಸಕಇ 334 ಪಕವಿ 2017, ದಿನಾಂಕ: 19-05-2017 ಇವುಗಳನ್ನು ಹಿಂಪಡೆಯಲಾಗಿದೆ.

ಈ ಕಾರ್ಯಕ್ರಮಕ್ಕೆ ತಗಲುವ ವೆಚ್ಚವನ್ನು 2018-19 ನೇ ಸಾಲಿಗೆ ಒದಗಿಸಿದ ಅನುದಾನದ ಮಿತಿಯಲ್ಲಿಯೇ ಕಾರ್ಯಕ್ರಮ ಅನುಷ್ಠಾನಗೊಳಿಸತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 788 ವೆಚ್ಚ-3/2018 ದಿನಾಂಕ: 08-01-2019 ರಂದು ನೀಡಿದ ಅಹಮನತಿಯನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಶಂಭುಲಿಂಗಯ್ಯ)
ಸರ್ಕಾರದ ಅಧೀನ ಕಾರ್ಯದರ್ಶಿ-1
ಸಮಾಜ ಕಲ್ಯಾಣ ಇಲಾಖೆ.

ಇವರಿಗೆ:

1. ಮಹಾಲೇಖಪಾಲರು, (ಎ&ಈ,ಲೆಕ್ಕ ಪರಿಶೋಧನೆ-1 ಮತ್ತು 2) ಕರ್ನಾಟಕ, ಬೆಂಗಳೂರು.
2. ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

3. ನಿರ್ದೇಶಕರು, ಪರಿಶಿಷ್ಟ ವರ್ಗಗಳ ನಿರ್ದೇಶನಾಲಯ, ಕೃಷಿಭವನ, ಬೆಂಗಳೂರು
4. ನಿರ್ದೇಶಕರು, ತಾಂತ್ರಿಕ ಶಿಕ್ಷಣ ಇಲಾಖೆ, ಅರಮನೆ ರಸ್ತೆ, ಬೆಂಗಳೂರು.
5. ನಿರ್ದೇಶಕರು, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದ್ ರಾವ್ ವೃತ್ತ, ಬೆಂಗಳೂರು.
6. ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
7. ಮುಖ್ಯ ಆಡಳಿತಾಧಿಕಾರಿ, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ವಸಂತನಗರ, ಬೆಂಗಳೂರು.
8. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಪ್ರತಿ ಮಾಹಿತಿಗಾಗಿ:-

1. ಮಾನ್ಯ ಸಮಾಜ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
2. ಅಧ್ಯಕ್ಷರು, ಕನ್ನಡ ಅಭಿವೃದ್ಧಿ ಪ್ರಾಧಿಕಾರ ಇವರ ಆಪ್ತ ಸಹಾಯಕರು, 2ನೇ ಮಹಡಿ, ವಿಧಾನಸೌಧ.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ.
4. ಸರ್ಕಾರದ ಜಂಟಿ/ಉಪ ಕಾರ್ಯದರ್ಶಿ, ಸಮಾಜ ಕಲ್ಯಾಣ ಇಲಾಖೆ ಇವರ ಆಪ್ತ ಸಹಾಯಕರು, ವಿಕಾಸಸೌಧ.

*******